ಸಂ: DHT-DDHLOWSP(KHTS)/1/2024 ದಿನಾಂಕ: 24-04-2024

**ಪತ್ರಿಕಾ ಪ್ರಕಟಣೆ**

**ವಿಷಯ:-** 2024-25 ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷದ ಡಿಪ್ಲೋಮಾ ಕೋರ್ಸಗೆ ನೇರ ಪ್ರವೇಶಕ್ಕಾಗಿ ಅರ್ಜಿಗಳ ಆಹ್ವಾನ.

*******

2024-25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 2ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ ಪ್ರವೇಶಕ್ಕಾಗಿ 32 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಈ ಕೆಳಗೆ ತಿಳಿಸಿದ ವಿದ್ಯಾರ್ಹತೆಯುಳ್ಳ ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.

**ವಿದ್ಯಾರ್ಹತೆ**

ಅ) ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

ಅಥವಾ

ಆ) ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.*

ಅಥವಾ

ಇ) 10ನೇ ತರಗತಿ ತೇರ್ಗಡೆ+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶಕ್ಕೆಅರ್ಹರು

ಅಥವಾ

ಈ) 10+2 ಪಾಸ್+(2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಹರು.

* ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು.

**ವಯೋಮಿತಿ:** ದಿನಾಂಕ:01-07-2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಯೋಮಿತಿ 27 ವರ್ಷ. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

**ಲ್ಯಾಟರಲ್ ಎಂಟ್ರಿ ಮುಖಾಂತರ 2 ನೇ ವರ್ಷದ ಡಿಪ್ಲೋಮಾ ಕೋರ್ಸಗೆ ನೇರ ಪ್ರವೇಶಕ್ಕಾಗಿ ಲಭ್ಯವಿರುವ ಸಂಸ್ಥೆಗಳು:**

| | | |
|---|---|---|
| 1. | ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ) | 13 ಅಭ್ಯರ್ಥಿಗಳು |
| 2. | ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) | 14 ಅಭ್ಯರ್ಥಿಗಳು |
| 3. | ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) | 03 ಅಭ್ಯರ್ಥಿಗಳು |
| 4. | ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) | 02 ಅಭ್ಯರ್ಥಿಗಳು |
| | **ಒಟ್ಟು** | **32 ಅಭ್ಯರ್ಥಿಗಳು** |

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ:08372-297221 ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

**ಅರ್ಜಿಗಳನ್ನು ಆನಲೈನ್‌ನಲ್ಲಿ ಡೌನಲೋಡ್ ಮಾಡಿಕೊಳ್ಳಲು ಲಿಂಕ್**

**https://khtigadag.ac.in/Lateralentryadmissionform.pdf**

ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ **"ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102"** ಇವರಿಗೆ ಸಲ್ಲಿಸಲು ಕೊನೆಯ ದಿನಾಂಕ: 31-05-2024.

24/4

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ
ನಿರ್ದೇಶಕರು, ಕೈಮಗ್ಗ ಮತ್ತು ಜವಳಿ

No: DHT-DDHLOWSP(KHTS)/1/2024 Date : 24-04-2024

## ***PRESS NOTIFICATION***

Sub:- Inviting applications for Direct Second Year (Lateral Entry) Diploma in Handloom and Textile Technology course for 2024-25.

*******

Applications are invited for Direct Second Year (Lateral Entry) Diploma in Handloom and Textile Technology for the academic year 2024-25 from the eligible candidates in the following institutes.

**Eligibility for Direct Second Year (Lateral Entry) DHTT:** The candidate should have the following educational criteria:-

A) Should have passed 10+2 examination with Mathematics, Physics & Chemistry.

(OR)

B) Should have passed 10+2 examination in vocational stream of any textile discipline*

(OR)

C) $10^{th}$ pass + (2 years ITI) shall be eligible for admission to second year Diploma course.

(OR)

D) 10+2 Pass+(2 years ITI) shall be eligible for admission to second year Diploma course.

* Candidates with eligibility of 10+2 in vocational stream of textile discipline shall undergo bridge course in Maths, Physics, Chemistry conducted by IIHT.

The age limit for Lateral Entry admissions for SC/ST category is 27 years and for other than SC/ST category is 25 years as on 01-07-2024.

As per the guidelines the students will be paid a monthly stipend of Rs.2,500/- during the course of study. Hostel facilities are made available in the respective I.I.H.T`s as per their rules.

A Total of 32 candidates will be selected to study the above course in the following institutions.

| | |
|---|---|
| 1) Karnataka Handloom Technology Institute, Gadag (Karnataka) | 13 candidates |
| 2) Indian Institute of Handloom Technology, Salem (Tamil Nadu) | 14 candidates |
| 3) S.P.K.M. Indian Institute of Handloom Technology, Venkatageri. (Andhra Pradesh) | 03 candidates |
| 4) Indian Institute of Handloom Technology , Kannur, (Kerala) | 02 candidates |
| Total........... | **32 candidates** |

Merit candidates shall be called for admission through counseling. Interested candidates may collect the application forms free of cost from the Principal, Karnataka Handloom Technology Institute Narasapur, Gadag-Betageri–582102 Ph: 08372-297221 Mobile No: 9449162822 or from the Joint Director/Deputy Director /Assistant Director, Handloom and Textiles Department of respective Districts.

**Online application download link**

**https://khtigadag.ac.in/Lateralentryadmissionform.pdf**

Completely filled applications with documents are required to be sent to "**The Principal, Karnataka Handloom Technology Institute, Narasapur, Gadag-Betageri – 582102**". The last date for receipt of applications is: 31-05-2024.

24/4.

Commissioner for Textile Development
and Director of Handlooms and Textiles,